ಕ್ರೀಡೆಗಳಲ್ಲಿ ಆಗುತ್ತಿರುವ ಮಾರ್ಪಾಡು ನೀತಿ ನಿಯಮಗಳಲ್ಲಿ ಆಧುನಿಕತೆ ಬಗ್ಗೆ ತಜ್ಞರಿಂದ ತರಬೇತಿ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ. ತಾಲ್ಲೂಕು ಮತ್ತು ಜಿಲ್ಲೆಗಳಲ್ಲಿ ಆಯ್ದ ಕ್ರೀಡಾಪಟುಗಳಿಗೆ ಕ್ರೀಡಾ ತರಬೇತಿ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ.

ಮಂಗಳೂರು ನಗರದ ಸರ್ಕಾರಿ ಕಾಲೇಜುಗಳಲ್ಲಿ ಉಪನ್ಯಾಸಕರುಗಳ ಹಾಗೂ ಶಿಕ್ಷಕೇತರರ ಕೊರತೆ.

63(315) ಶ್ರೀ ಎನ್. ಯೋಗೀಶ್ ಭಟ್ (ಮಂಗಳೂರು) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಂಗಳೂರು ನಗರದ ಸರ್ಕಾರಿ ಕಾಲೇಜುಗಳಲ್ಲಿ ಉಪನ್ಯಾಸಕರ ಹಾಗೂ ಶಿಕ್ಷಕೇತರರ ಕೊರತೆ ಇದೆಯೇ?

ಆ) ಹಾಗಿದ್ದಲ್ಲಿ ಅವುಗಳನ್ನು ಯಾವಾಗ ನೇಮಕಾತಿ ಮಾಡಲಾಗುವುದು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :—

ಅ) ಮಂಗಳೂರು ನಗರದಲ್ಲಿರುವ ಎರಡು ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಎರಡು ಹಿಂದಿ ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತವೆ. ಶಿಕ್ಷಕೇತರರ ಕೊರತೆ ಇರುವುದಿಲ್ಲ.

ಆ) ಸದ್ಯದಲ್ಲೇ ಈ ಹುದ್ದೆಗಳನ್ನು ಭರ್ತಿ ಮಾಡುವ ಕ್ರಮ ತೆಗೆದುಕೊಳ್ಳಲಾಗುವುದು.

ರಾಜ್ಯ ಸರ್ಕಾರ ಕೈಗಾರಿಕೆಗಳ ವಿರುದ್ಧ ಪರಿಸರ ಮಾಲಿನ್ಯದ ಬಗ್ಗೆ ಕೈಗೊಂಡ ಕ್ರಮದ ಬಗ್ಗೆ

64(305) ಶ್ರೀ ಎನ್. ಯೋಗೇಶ್ ಭಟ್ (ಮಂಗಳೂರು) :—ಮಾನ್ಯ ಗಣಿ ಮತ್ತು ಭೂವಿಜ್ಞಾನ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸರ್ಕಾರವು ರಾಜ್ಯ ಎಷ್ಟು ಕೈಗಾರಿಕೆಗಳ ವಿರುದ್ಧ ಪರಿಸರ ಮಾಲಿನ್ಯದ ಬಗ್ಗೆ ಕ್ರಮ ಕೈಗೊಂಡಿದೆ ಹಾಗೂ ಯಾವ ಕ್ರಮ ಕೈಗೊಂಡಿದೆ (ವಿವರ ಒದಗಿಸುವುದು)

ಆ) ರಾಜ್ಯದಲ್ಲಿ ಪರಿಸರ ನೈರ್ಮಲ್ಯದ ಜಾಗೃತಿಗೆಂದೇ ಹಾಕಿಕೊಂಡಿರುವ ಕಾರ್ಯಕ್ರಮಗಳೇನು?

ಶ್ರೀ ಎ.ಬಿ. ಪಾಟೀಲ್ (ಗಣಿ ಮತ್ತು ಭೂವಿಜ್ಞಾನ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :—

ಅ) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು 1-4-98 ರಿಂದ 28-2-99 ರವರೆಗೆ ಜಲ ಮತ್ತು ವಾಯು ಕಾಯ್ದೆ ಅಡಿಯಲ್ಲಿ ಕೈಗಾರಿಕೆಗಳ ವಿರುದ್ಧ ಕ್ರಮ ಕೈಗೊಂಡಿರುವ ಬಗ್ಗೆ ವಿವರಗಳು ಈ ಕೆಳಕಂಡಂತಿವೆ

1) ಜಲಕಾಯ್ದೆ 1974 ಅಡಿಯಲ್ಲಿ

1)	ಕಾರಣ ಕೇಳುವ ನೋಟಿಸು	:	253 ಕೈಗಾರಿಕೆಗಳಿಗೆ ಜಾರಿಗೊಳಿಸಿದೆ
2)	ನಿರ್ಭಂದಿತ ಆಜ್ಞೆಗಳು	:	25 ಕೈಗಾರಿಕೆಗಳಿಗೆ ನೀಡಿದೆ.
3)	ಕ್ರಿಮಿನಲ್ ಮೊಕದ್ದಮೆಗಳ ವಿರುದ್ಧ ಹೂಡಿದೆ	:	28 ಕೈಗಾರಿಕೆಗಳಿಗೆ
4)	ಮುಚ್ಚುವ ಆದೇಶಗಳು	:	9 ಕೈಗಾರಿಕೆಗಳಿಗೆ ನೀಡಿದೆ.

2) ವಾಯು ಕಾಯ್ದೆ 1981ರ ಅಡಿಯಲ್ಲಿ

1)	ಕಾರಣ ಕೇಳು ನೋಟೀಸು	:	187 ಕೈಗಾರಿಕೆಗಳಿಗೆ ಜಾರಿಗೊಳಿಸಿದೆ
2)	ಕ್ರಿಮಿನಲ್ ಮೊಕದ್ದಮೆಗಳು	:	06 ಕೈಗಾರಿಕೆಗಳ ವಿರುದ್ಧ ಹೂಡಿದೆ.
3)	ಮುಚ್ಚುವ ಆದೇಶಗಳು	:	11 ಕೈಗಾರಿಕೆಗಳಿಗೆ ನೀಡಿದೆ.

ಆ) ರಾಜ್ಯದಲ್ಲಿ ಕೈಗಾರಿಕೆಗಳು, ಸ್ಥಳೀಯ ಸಂಸ್ಥೆಗಳು, ನಗರಪಾಲಿಕೆಗಳು ಮತ್ತು ವಾಹನಗಳಿಂದ ಉಂಟಾಗುವ ಪರಿಸರ ಮಾಲಿನ್ಯದ ಬಗ್ಗೆ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಹಲವಾರು ಕಾರ್ಯಕ್ರಮಗಳನ್ನು ಜಿಲ್ಲಾ ಮತ್ತು ತಾಲ್ಲೂಕು ಮಟ್ಟಗಳಲ್ಲಿ ಹಮ್ಮಿಕೊಂಡಿದೆ.

1) ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಪರಿಸರ ನೈರ್ಮಲ್ಯದ ಬಗ್ಗೆ ಜಾಗೃತಿ ಮೂಡಿಸಲು ಸಮಾರಂಭಗಳು, ಪರಿಸರಕ್ಕೆ ಸಂಬಂಧಿಸಿದ ಚಿತ್ರಕಲಾ ಸ್ಪರ್ಧೆ, ಚರ್ಚಾಕೂಟ, ಪರಿಸರ ಓಟ ಮತ್ತು ಕರಪತ್ರಗಳನ್ನು ಮುದ್ರಿಸಿ ಹಂಚುವ ಕಾರ್ಯಕ್ರಮಗಳನ್ನು ಹಾಕಿಕೊಂಡಿದೆ.

2) ಪರಿಸರ ಸಂರಕ್ಷಣಾ ವಿಷಯಗಳ ಬಗ್ಗೆ ವರ್ಷಾಂದ್ಯಂತ ಜಾಗೃತಿ ಮೂಡಿಸಲು ವಿಶ್ವ ಪರಿಸರ ದಿನಾಚರಣೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಆಚರಿಸುವುದು.

3) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಒಡೆತನದಲ್ಲಿರುವ ಪರಿಸರ ತರಬೇತಿ ಸಂಸ್ಥೆಯಿಂದ ಸಾರ್ವಜನಿಕರಿಗೆ ಉದ್ಯಮಿಗಳಿಗೆ ಮತ್ತು ಸರ್ಕಾರೇತರ ಸಂಸ್ಥೆಗಳಿಗೆ ಪರಿಸರ ಸಂರಕ್ಷಣೆಯ ಬಗ್ಗೆ ತರಬೇತಿ ಮತ್ತು ವಿಚಾರಗೋಷ್ಠಿ ನೀಡುವುದು.

4) ಬೆಂಗಳೂರು ನಗರದ ಪ್ರಮುಖ ಸ್ಥಳಗಳಲ್ಲಿ ವಾಹನಗಳಿಂದ ಉಂಟಾಗುವ ವಾಯುವಿನ ಗುಣಮಟ್ಟವನ್ನು ಮಾಪನ ಮಾಡಿ ಜನಸಾಮಾನ್ಯರಿಗೆ ತಿಳಿಸಲು ಸ್ವಯಂಚಾಲಿತ ಮಾಪನದ ಸೂಚನಾ ಫಲಕಗಳನ್ನು ನಿರ್ಮಿಸುವುದು.

5) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ವಾಹಿನಿ ವಾಹನಗಳ ಮುಖಾಂತರ ಬೆಂಗಳೂರಿನ ಮುಖ್ಯ ವೃತ್ತಗಳಲ್ಲಿ ವಾಹನಗಳ ಚಾಲಕರಿಗೆ : ಮಾಲೀಕರಿಗೆ ಪ್ರಚಾರ ಮಾಡುವ ಮೂಲಕ ವಾಯು ಮಾಲಿನ್ಯದ ಬಗ್ಗೆ ಜಾಗೃತಿ ಮೂಡಿಸುವುದು.

6) ರಾಜ್ಯದ ಪ್ರಮುಖ ಪತ್ರಿಕೆಗಳು ಹಾಗೂ ಕೆಲವು ಸಂಸ್ಥೆಗಳ ವಿಚಾರ ಸಂಕೀರಣ : ಸಮಾರಂಭಗಳು : ವಿಶೇಷ ಸಂಚಿಕೆಗಳಲ್ಲಿ ಪರಿಸರ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸುವ ಜಾಹಿರಾತುಗಳನ್ನು ನೀಡುವುದು.

7) ರಾಜ್ಯಾದ್ಯಂತ ನಡೆಯಂವ ಪರಿಸರ ಸಂರಕ್ಷಣೆಗೆ ಸಂಬಂಧಪಟ್ಟಂತೆ ವಿಚಾರ ಸಂಕೀರ್ಣಗಳು, ತಾಂತ್ರಿಕ ಅಧಿವೇಶನಗಳು, ವಿಚಾರ ಗೋಷ್ಠಿಗಳು ಹಾಗೂ ಮಂಡಳಿಯ ಸಮಾರಂಭಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದರ ಜೊತೆಗೆ ಸಮಾರಂಭಗಳನ್ನು ನಡೆಸಲು ಸಹ ಪ್ರೋತ್ಸಾಹಿಸುತ್ತದೆ.

ಅಧ್ಯಕ್ಷರು :— ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಉತ್ತರಗಳನ್ನು ಮಂಡಿಸಲಾಯಿತು.

2. ಪ್ರಕಟಣೆ

ಅಧ್ಯಕ್ಷರು :— ಶ್ರೀ ಕೆ.ಎಸ್. ಈಶ್ವರಪ್ಪ, ವಿಧಾನಸಭಾ ಸದಸ್ಯರು ಹಾಗೂ ಬಿಜೆಪಿ ಶಾಸಕಾಂಗ ಪಕ್ಷದ ನಾಯಕರು, ಇವರು ದಿನಾಂಕ: 2-3-1999ರಂದು ಪತ್ರ ಬರೆದು ಮಾನ್ಯ ಸದಸ್ಯರಾದ ಶ್ರೀ ಹೆಚ್.ಎನ್. ನಂಜೇಗೌಡರವರನ್ನು ಪಕ್ಷದ ಶಿಸ್ತು ಉಲ್ಲಂಘನೆಯ ಹಿನ್ನಲೆಯಲ್ಲಿ ಭಾರತೀಯ ಜನತಾ ಪಕ್ಷದ ರಾಜ್ಯ ಘಟಕದ ಅಧ್ಯಕ್ಷರಾದ ಶ್ರೀ ಬಿ.ಎಸ್. ಯಡಿಯೂರಪ್ಪನವರು ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ಆರು ವರ್ಷಗಳ ಕಾಲ ಉಚ್ಚಾಟಿಸಿರುತ್ತಾರೆಂದು ತಿಳಿಸಿರುತ್ತಾರೆ. ಆದುದರಿಂದ ಶ್ರೀ ಹೆಚ್.ಎನ್. ನಂಜೇಗೌಡ, ವಿಧಾನಸಭಾ ಸದಸ್ಯರು- ಇವರನ್ನು ಸದನದಲ್ಲಿ ಯಾವುದೇ ಪಕ್ಷಕ್ಕೆ ಸೇರದಿರುವ ಸದಸ್ಯ ಎಂದು ಪರಿಗಣಿಸುತ್ತೇನೆ.